**815 ಶ್ರೀ ಲಾಲಾಜಿ ಆರ್.ಮೆಂಡನ್ (ಕಾಪು)** : ಮಾನ್ಯ ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾಪು ವಿಧಾನಸಭಾ ಕ್ಷೇತ್ರದ ಹೆಜಮಾಡಿ ಮೀನುಗಾರಿಕೆ ಬಂದರು ಪ್ರಸ್ತಾವನೆ ಹಾಗೂ ಪ್ರಗತಿ ಯಾವ ಹಂತದಲ್ಲಿದೆ;

ಆ) ಹೆಜಮಾಡಿ ಶಾಂಭವಿ ನದಿಯ ಬಂದರು ಪ್ರದೇಶದಲ್ಲಿ ನದಿಯ ಹೂಳೆತ್ತುವ ಯೋಜನೆಗೆ ಹಣ ಮಂಜೂರಾಗಿದ್ದರೂ ಯಾವುದೇ ಕಾಮಗಾರಿ ಪ್ರಾರಂಭಿಸದಿರುವ ಬಗ್ಗೆ ಇಲಾಖೆಯ ನಿಲುವೇನು;

ಇ) ಕೇಂದ್ರ ಹಾಗೂ ರಾಜ್ಯ ಸರ್ಕಾರದ ಜಂಟಿ ಯೋಜನೆಯಿಂದ ಈ ಬಂದರು ಯೋಜನೆಗೆ ಜರೂರಾಗಿ ಹಣ ಬಿಡುಗಡೆಗೊಳಿಸಿ ಬಂದರು ಕಾಮಗಾರಿ ಪ್ರಾರಂಭಿಸಲಾಗುವುದೇ?

**ಶ್ರೀ ಆನಂದ ವಸಂತ ಅಸ್ನೋಟಿಕರ (ಮೀನುಗಾರಿಕೆ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು)** :

ಅ) ಕಾಪು ವಿಧಾನಸಭಾ ಕ್ಷೇತ್ರದ ಹೆಜಮಾಡಿ ಮೀನುಗಾರಿಕೆ ಇಳಿದಾಣ ಕೇಂದ್ರವನ್ನು ಕೇಂದ್ರ ಪುರಸ್ಕೃತ ಯೋಜನೆಯಡಿ ಅಂದಾಜು ರೂ.135.00 ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಿ ಮೀನುಗಾರಿಕೆ ಚಟುವಟಿಕೆಗಳನ್ನು 2002ನೇ ಸಾಲಿನಿಂದಲೇ ನಡೆಸಿಕೊಂಡು ಬರಲಾಗುತ್ತಿದೆ. ಬಂದರಿನಲ್ಲಿ ಅಧಿಕ ಪ್ರಮಾಣದಲ್ಲಿ ಹೂಳು ತುಂಬಿದ್ದರಿಂದ, ಇಳಿದಾಣ ಕೇಂದ್ರವನ್ನು ಪೂರ್ಣ ಪ್ರಮಾಣದಲ್ಲಿ ಉಪಯೋಗಿಸಿಕೊಳ್ಳಲು ಅನುವಾಗುವಂತೆ ರೂ.87.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಹೂಳೆತ್ತುವ ಮತ್ತು ಗೈಡ್‌ಬಂಡ್ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಲಾಯಿತಾದರೂ ತದನಂತರ ಅದರೊಡನೆ ಇನ್ನೂ ಕೆಲವು ಅಗತ್ಯ ಪೂರಕ ಕಾಮಗಾರಿಗಳನ್ನು ಕೈಗೊಳ್ಳಬೇಕಾದ ಅವಶ್ಯಕತೆ ಕಂಡು ಬಂದಿದ್ದರಿಂದ ಅದನ್ನೂ ಸೇರಿಸಿಕೊಂಡು ಹೆಜಮಾಡಿ ಕೋಡಿ ಮೀನುಗಾರಿಕೆ ತಂಗುದಾಣ 2ನೇ ಹಂತದ ಕಾಮಗಾರಿ ಎಂದು ಪರಿಗಣಿಸಿ ಪರಿಷ್ಕೃತ ಅಂದಾಜನ್ನು ತಯಾರಿಸಿ ವಿವರವಾದ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಬಂದರು ಇಲಾಖೆಯನ್ನು ಕೊರಲಾಗಿದ್ದು, ಅದು ಬಂದ ನಂತರ ಅದರ ಆರ್ಥಿಕ ಮತ್ತು ತಾಂತ್ರಿಕ ಸಾರ್ಥಕತೆಗಳ ಬಗ್ಗೆ ಪರಿಶೀಲಿಸಿ ಸೂಕ್ತ ನಿರ್ಣಯ ಕೈಗೊಳ್ಳಲಾಗುವುದು.

ಆ) ಹೆಜಮಾಡಿ ಮೀನುಗಾರಿಕೆ ಇಳಿದಾಣ ಕೇಂದ್ರದಲ್ಲಿ ಹೂಳೆತ್ತುವ ಕಾಮಗಾರಿಗಾಗಿ ಆಗಸ್ಟ್ 2007 ರಲ್ಲಿ ರೂ.200.00 ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. ಆದರೆ,

ತಡೆಗೋಡೆಗಳನ್ನು ನಿರ್ಮಿಸದೇ ಹೂಳೆತ್ತುವುದರಿಂದ ಯಾವುದೇ ಪ್ರಯೋಜನ ವಿಲ್ಲವಾದ್ದರಿಂದ ಅದರ ಆರ್ಥಿಕ ಹಾಗೂ ತಾಂತ್ರಿಕ ಸಾರ್ಥಕತೆ ಪರಿಶೀಲಿಸಿ ಕೊಳ್ಳುವಂತೆ ಸಿ.ಡಬ್ಲ್ಯೂ.ಪಿ.ಆರ್.ಎಸ್. ಪುಣೆರವರು ತಾಂತ್ರಿಕ ಅಭಿಪ್ರಾಯವನ್ನು ನೀಡಿದ್ದು ಅದರಂತೆ ಮೊದಲು ತಡೆಗೋಡೆ/ ಗೈಡ್‌ಬಂಡ್ ನಿರ್ಮಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸುವಂತೆ ಹಾಗೂ ಅದು ಆರ್ಥಿಕ ಮತ್ತು ತಾಂತ್ರಿಕವಾಗಿ ಸಾರ್ಥಕವಲ್ಲ ಅನ್ನುವುದಾದರೆ ಅದನ್ನು ಕೈಗೊಳ್ಳದಿರಲು ಮೀನುಗಾರಿಕೆ ನಿರ್ದೇಶಕರಿಗೆ ಸೂಚಿಸಲಾಗಿರುತ್ತದೆ.

ಇ) ಹೆಜಮಾಡಿ ಇಳಿದಾಣ ಕೇಂದ್ರದಲ್ಲಿ ತಡೆಗೋಡೆ ಮತ್ತು ಗೈಡ್‌ಬಂಡ್ ನಿರ್ಮಾಣ ಹಾಗೂ ಹೂಳೆತ್ತುವ ಕಾಮಗಾರಿಗಳನ್ನು ಒಳಗೊಂಡಂತೆ ವಿವರವಾದ ಅಂದಾಜು ಪಟ್ಟಿಯನ್ನು ಬಂದರು ಇಲಾಖೆಯಿಂದ ಪಡೆದು ಅದು ತಾಂತ್ರಿಕವಾಗಿ ಮತ್ತು ಆರ್ಥಿಕವಾಗಿ ಲಾಭದಾಯಕ ವಾಗುವಂತಿದ್ದರೆ ಮಾತ್ರ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಅನುದಾನ ಪಡೆದು ಕಾರ್ಯಗತಗೊಳಿಸಲಾಗುವುದು.

**966 ಶ್ರೀ ವೀರಭದ್ರಪ್ಪ ಹಾಲಹರವಿ (ಹುಬ್ಬಳ್ಳಿ–ಧಾರವಾಡ ಪೂರ್ವ) :** ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಮತ್ತು ನಗರಸಭೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಗೆ 2007–08 ಹಾಗೂ 2008–09ನೇ ಸಾಲಿನಲ್ಲಿ ಎಸ್‌ಎಫ್‌ಸಿ ಗ್ರಾಂಟನ್ನು ಬಿಡುಗಡೆ ಮಾಡಿದ ಅನುದಾನ ಮೊತ್ತವೆಷ್ಟು;

ಆ) ಪ್ರತಿಯೊಂದು ಕಾಮಗಾರಿಗಳವಾರು ವಿವರ ನೀಡುವುದು?

**ಶ್ರೀ ಎಸ್.ಸುರೇಶ್‌ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಮತ್ತು ನಗರಸಭೆ ಸಚಿವರು) :**

ಅ) ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಗೆ ಎಸ್.ಎಫ್.ಸಿ. ಅನುದಾನ 2007–08 ಹಾಗೂ 2008–09ನೇ ಸಾಲಿಗೆ ಈ ಕೆಳಗಿನಂತೆ ಬಿಡುಗಡೆಗೊಳಿಸಲಾಗಿದೆ.